# 1ನೇ ಅಧಿಕ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ ಚನ್ನರಾಯಪಟ್ಟಣ

ಸಿ.ಸಿ.837/2022

ಪ್ರಮಾಣ ವಚನ ಬೋಧಿಸಲಾಯಿತು

**ಸಾಕ್ಷಿದಾರರ ಹೆಸರು** : ನಂಜೇಗೌಡ ಚಾಸಾ- 5

**ತಂದೆಯ ಹೆಸರು** : ಹನುಮಂತೇಗೌಡ ಪ್ರಾಸಾ- 4

**ವಯಸ್ಸು** : 70 ವರ್ಷ

**ಉದ್ಯೋಗ** : ವ್ಯವಸಾಯ

**ವಾಸ** ಲಕ್ಕಿಹಳ್ಳಿ ದಿನಾಂಕ: 03.07.2026

**ಮುಖ್ಯ ವಿಚಾರಣೆ :- ಎ.ಪಿ.ಪಿ. ಯವರಿಂದ**

ಆರೋಪಿ ಗೊತ್ತಿಲ್ಲ. ಚಾಸಾ-**1** ರಿಂದ **3** ಗೊತ್ತಿಲ್ಲ. ಮೃತ ಪ್ರಮೋದ್ ಗೊತ್ತಿಲ್ಲ. ಅಪಘಾತ ಹೇಗೆ ಆಯಿತು ಎಂದು ಗೊತ್ತಿಲ್ಲ. ಯಾರ ತಪ್ಪಿನಿಂದ ಅಪಘಾತವಾಗಿದೆ ಎಂದು ನನಗೆ ಗೊತ್ತಿಲ್ಲ. ನಾನು ಯಾವುದೇ ಹೇಳಿಕೆ ನೀಡಿಲ್ಲ. ಸದರಿ ಅಪಘಾತವನ್ನು ನಾನು ನೋಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು** ಸಂಪೂರ್ಣ **ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ನುರಿತ ಎಪಿಪಿ ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ.** ದಾಖಲೆಗಳನ್ನು ಪರಿಶೀಲಿಸಿ **ಸಾಕ್ಷಿಯನ್ನು** ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ **ಪಾಟೀ ಸವಾಲು ಮಾಡಲು ಅನುಮತಿ**ಸಲಾಯಿತು**)**

**ಪಾಟೀ ಸವಾಲು :-** ಶ್ರೀಮತಿ ಎ.ಪಿ.ಪಿ ರವರಿಂದ

ದಿ: **09.04.2022**ರಂದು ಮ **4.00** ಗಂಟೆಯ ಸಮಯದಲ್ಲಿ ಆರೋಪಿಯ ತನ್ನ ಬಾಬ್ತು ಕೆಎ-**13**-ಇಕೆ-**3425** ಬೈಕ್ ನಲ್ಲಿ ನಿಗದಿತಗಿಂತ ಹೆಚ್ಚಿನ ಸಹಪ್ರಯಾಣಿಕಾರಾದ ಚಾಸಾ-**2, 3** ರವರನ್ನು ಹಾಗೂ ಮೃತ ಪ್ರಮೋದ್ ರವರನ್ನು ಕುರಿಸಿಕೊಂಡು ಅತಿವೇಗ ಹಾಗೂ ಅಜಾಗರುಕತೆಯಿಂದ ಚಾಲನೆ ಮಾಡಿಕೊಂಡು ಬಂದು ಲೈಟ್ ಕಂಬಕ್ಕೆ ಅಪಘಾತ ಪರಿಣಾಮ ಪ್ರಮೋದ್ ರವರು ಸ್ಥಳದಲ್ಲಿ ಮೃತ ಪಟ್ಟಿರುತ್ತಾರೆ ಎಂದರೆ ಸರಿಯಲ್ಲ. ಹಿಂಬದಿ ಸವಾರಾದ ಚಾಸಾ-**2 , 3** ರವರಿಗೆ ಸಣ್ಣಪುಟ್ಟ ಗಾಯಗಳು ಆಗಿರುತ್ತದೆ ಎಂದರೆ ಗೊತ್ತಿಲ್ಲ . ಚಾಸಾ-**4** ಮತ್ತು ನಾನು ಅವರನ್ನು ಸುಧಾರಿಸಿ ಆಸ್ಪತ್ರೆಗೆ ಕಳುಹಿಸಿರುತ್ತೇವೆ ಎಂದರೆ ಸರಿಯಲ್ಲ. ಈ ರೀತಿ ಹೇಳಿಕೆ ನೀಡಿರುತ್ತೇನೆ ಎಂದರೆ

ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಹೇಳಿಕೆಯನ್ನು ನಿಪಿ-4 ಎಂದು ಗುರುತಿಸಲಾಯಿತು.

ಎಲ್ಲಾ ವಿಚಾರ ಗೊತ್ತಿದ್ದರು ಸಹ ಆರೋಪಿಗೆ ಸಹಾಯಾ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿಯ ಪರ ವಕೀಲರಿಂದಃ

ಏನು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

**ಮರು ವಿಚಾರಣೆ ಃ- ಇಲ್ಲ**

**(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ.ಹೇ.ಕೇ.ಸ.ಇ.ಎ.ಒ.,**

1ನೇ ಅಧಿಕ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,
ಚನ್ನರಾಯಪಟ್ಟಣ